## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 301 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್ ( ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅನ್ನಭಾಗ್ಯ ಯೋಜನೆಯಡಿಯಲ್ಲಿ ನ್ಯಾಯಬೆಲೆ ಅಂಗಡಿಗಳಿಂದ ವಿತರಿಸುತ್ತಿರುವ ಪದಾರ್ಥಗಳು ಯಾವುವು: (ವಿವರಗಳನ್ನು ನೀಡುವುದು) | ರಾಜ್ಯ ಸರ್ಕಾರದಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಅರ್ಹ ಫಲಾನುಭವಿಗೆ 05 ಕೆ.ಜಿ ಹೆಚ್ಚುವರಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.<br><br>ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ ಅನ್ನ ಯೋಜನೆ (AAY) ಕಾರ್ಡಿಗೆ 35 ಕೆ.ಜಿ ಆಹಾರ ಧಾನ್ಯಗಳನ್ನು ಪ್ರತಿ ಮಾಹೆ ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 14 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 21 ಕೆ.ಜಿ ರಾಗಿ/ಜೋಳದ ಹಂಚಿಕೆ ಮಾಡಲಾಗುತ್ತಿದೆ. ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ಪ್ರತಿ ಮಾಹೆ 5 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 2 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ ಲಭ್ಯ ಪ್ರಮಾಣದಂತೆ 03 ಕೆ.ಜಿ ರಾಗಿ/ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ.<br><br>ರಾಜ್ಯ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ರಾಜ್ಯ ಸರ್ಕಾರದಿಂದ ಪ್ರತಿ ಮಾಹೆ 5 ಕೆ.ಜಿ ಅಕ್ಕಿಯನ್ನು ಹಂಚಿಕೆ ಮಾಡಲಾಗುತ್ತಿದೆ. |
| ಆ | ಒಬ್ಬ ಪಡಿತರ ವ್ಯಕ್ತಿಗೆ ಎಷ್ಟು ಪ್ರಮಾಣದಲ್ಲಿ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ: (ವಿವರಗಳನ್ನು ನೀಡುವುದು) | |

| | | |
|---|---|---|
| ಇ | ಕಳೆದ ಒಂದೂವರೆ ವರ್ಷದಲ್ಲಿ ಅನ್ನಭಾಗ್ಯ ಯೋಜನೆಗಾಗಿ ಸರ್ಕಾರ ವೆಚ್ಚ ಮಾಡಿರುವ ಮೊತ್ತವೆಷ್ಟು: | ಅನ್ನಭಾಗ್ಯ ಯೋಜನೆಯಡಿ 2025-26ನೇ ಸಾಲಿನಲ್ಲಿ ರೂ. 641082.48 ಲಕ್ಷಗಳ ವೆಚ್ಚ ಭರಿಸಲಾಗಿದ್ದು, 2026-27ನೇ ಸಾಲಿನ ಜುಲೈ ಮಾಹೆಯ ಅಂತ್ಯದವರೆಗೆ ರೂ.108561.63 ಲಕ್ಷಗಳನ್ನು ವೆಚ್ಚ ಭರಿಸಲಾಗಿರುತ್ತದೆ. |
| ಈ | ಸರ್ಕಾರದ ಯೋಜನೆಯಂತೆ 5 ಕೆ.ಜಿ ಅಕ್ಕಿ ನೀಡಿ ಉಳಿಕೆ ಪದಾರ್ಥಕ್ಕೆ ಪಡಿತರದಾರರಿಗೆ ಎಷ್ಟು ಪ್ರಮಾಣದ ಮೊತ್ತವನ್ನು ಅವರುಗಳ ಖಾತೆಗಳಿಗೆ ಜಮೆ ಮಾಡಲಾಗುತ್ತಿತ್ತು: | ಸರ್ಕಾರದ ಆದೇಶ ದಿನಾಂಕ 19.02.2025 ರಂತೆ ಫೆಬ್ರವರಿ 2025 ಮಾಹೆಯಿಂದಲೂ ಅನ್ನಭಾಗ್ಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿಯನ್ನು ಮಾತ್ರ ವಿತರಣೆ ಮಾಡಲಾಗುತ್ತಿದೆ. 5 ಕಜಿ ಅಕ್ಕಿ ಹೊರತು ಪಡಿಸಿ ಉಳಿಕೆ ಪದಾರ್ಥವನ್ನು ವಿತರಣೆ ಮಾಡಲಾಗುತ್ತಿಲ್ಲ. |
| ಉ | ಪ್ರಸ್ತುತ ಪೂರ್ಣ ಪ್ರಮಾಣದಲ್ಲಿ ಪಡಿತರವನ್ನು ವಿತರಿಸಲಾಗುತ್ತಿದೆಯೇ ಅಥವಾ ಅಲ್ಪ ಪ್ರಮಾಣದಲ್ಲಿ ಪಡಿತರವನ್ನು ನೀಡಿ ಉಳಿದದ್ದಕ್ಕೆ ಮೊತ್ತವನ್ನು ಪಾವತಿ ಮಾಡಲಾಗುತ್ತಿದೆಯೇ? (ವಿವರಗಳನ್ನು ನೀಡುವುದು) | ಪೂರ್ಣ ಪ್ರಮಾಣದಲ್ಲಿ ಪಡಿತರವನ್ನು ವಿತರಿಸಲಾಗುತ್ತಿದೆ. |

ಇ-ಆನಾಸ 86 ಆನಾಸ 2026

(ರಹೀಂ ಖಾನ್ ಅರ್ಷದ್)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಸಚಿವರು